**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಪುಟ್ಟಣ್ಣ ಮತ್ತು ಶ್ರೀ ಡಿ.ಟಿ ಶ್ರೀನಿವಾಸ್ (ಡಿ.ಟಿ.ಎಸ್) ರವರುಗಳು ಮಂಡಿಸಿರುವ ನಿಯಮ 72 ರಡಿ ಗಮನ ಸೆಳೆಯು ಸೂಚನೆ**

**ವಿಷಯ:**

**ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಶಿಕ್ಷಕರುಗಳು ಅಕಾಲಿಕವಾಗಿ ಮರಣ ಹೊಂದುತ್ತಿದ್ದು ಸದರಿಯವರ ಕುಟುಂಬದ ನಿರ್ವಹಣೆಗಾಗಿ ಅವರ ಅವಲಿಂಬಿತ ಕುಟುಂಬ ಸದಸ್ಯರಿಗೆ ವಿದ್ಯಾರ್ಹತೆಗನುಗುಣವಾಗಿ ಅನುಕಂಪದ ಆಧಾರದ ಮೇಲೆ ಹುದ್ದೆಗಳನ್ನು ನೀಡಿ ನೇಮಕಾತಿ ಆದೇಶ ನೀಡಲಾಗುತ್ತಿದೆ. ಸರ್ಕಾರಿ ಶಾಲೆಗಳ ಶಿಕ್ಷಕರುಗಳ ಅವಲಂಬಿತರಿಗೆ ಪ್ರಥಮ ದರ್ಜೆ ಸಹಾಯಕರು, ದ್ವಿತೀಯ ದರ್ಜೆ ಸಹಾಯಕರು ಹಾಗೂ ಡಿ ಗ್ರೂಪ್ ನೌಕರರನ್ನು ನೇಮಕಾತಿ ಮಾಡಲು ಅವಕಾಶವಿದೆ. ಆದರೆ ಅನುದಾನಿತ ಶಾಲೆಗಳ ಶಿಕ್ಷಕರುಗಳ ಅವಲಂಬಿತರಿಗೆ ಪ್ರಥಮ ದರ್ಜೆ ಸಹಾಯಕರು, ದ್ವಿತೀಯ ದರ್ಜೆ ಸಹಾಯಕರುಗಳನ್ನು ಮಾತ್ರ ನೇಮಕಾತಿ ಮಾಡುತ್ತಿದ್ದು ಡಿ ಗ್ರೂಪ್ ನೌಕರರನ್ನು ನೇಮಕಾತಿ ಮಾಡಲು ಅವಕಾಶ ನೀಡುತ್ತಿಲ್ಲ. ಆದ್ದರಿಂದ ಸರ್ಕಾರಿ ಶಾಲೆಗಳ ಶಿಕ್ಷಕರುಗಳ ಅವಲಂಬಿತರಿಗೂ ಅನುಕಂಪದ ಆಧಾರದ ಹುದ್ದೆ ನೀಡುತ್ತಿರುವಂತೆ ಅನುದಾನಿತ ಶಾಲೆಗಳ ಶಿಕ್ಷಕರುಗಳ ಅವಲಂಬಿತರಿಗೂ ಸಹ ಪ್ರಥಮ ದರ್ಜೆ ಸಹಾಯಕರು, ದ್ವಿತೀಯ ದರ್ಜೆ ಸಹಾಯಕರು ಹಾಗೂ ಡಿ ಗ್ರೂಪ್ ನೌಕರರನ್ನು ನೇಮಕಾತಿ ಮಾಡಲು ಅವಕಾಶ ನೀಡಬೇಕೆಂಬ ವಿಷಯವನ್ನು ನಿಯಮ-72ರಲ್ಲಿ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆಯುವ ಬಗ್ಗೆ.**

**ಉತ್ತರ:**

ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಂಸ್ಥೆಗಳಲ್ಲಿ ನೌಕರರ ನೇಮಕಾತಿ ಮತ್ತು ಸೇವಾ ನಿಬಂಧನೆಗಳು, ಷರತ್ತುಗಳು) ನಿಯಮ 1999 ರ ಅನುಬಂಧ-IV ರಲ್ಲಿನ ಪ್ರೌಢಶಾಲೆ ಸಿಬ್ಬಂದಿ ಮಾದರಿ ರಚನೆಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 8 ಎಸ್ಇಪಿ 2015, ದಿನಾಂಕ:26-09-2017ರಂದು ತಿದ್ದುಪಡಿ ಮಾಡುವ ಮೂಲಕ ಡಿ-ಗ್ರೂಪ್ ಹುದ್ದೆಯನ್ನು ಸಿಬ್ಬಂದಿ ಮಾದರಿ ರಚನೆಯಲ್ಲಿ ತೆಗೆದು ಹಾಕಲಾಗಿದೆ. ಮುಂದುವರೆದು ಸದರಿ ಹುದ್ದೆಗೆ ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಈ ಹಿನ್ನಲೆಯಲ್ಲಿ, ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶಿಕ್ಷಕರುಗಳು ಅಕಾಲಿಕವಾಗಿ ಮರಣ ಹೊಂದಿದ್ದಾಗ ಮೃತರ ಅವಲಂಬಿತರಿಗೆ ಡಿ-ಗ್ರೂಪ್ ಹುದ್ದೆಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡಲು ಅವಕಾಶವಿರುವುದಿಲ್ಲ. ಮೃತರ ಅವಲಂಬಿತರಿಗೆ ವಿದ್ಯಾರ್ಹತೆ ಅನುಗುಣವಾಗಿ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡುವ ಬಗ್ಗೆ ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ.

**ಸಂಖ್ಯೆ: ಇಪಿ 76 ಎಸ್‌ಇಎಸ್ 2026**

**(ಎಸ್ ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖಾ ಸಚಿವರು**